# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಜಲಾನಯನ ಅಭಿವೃದ್ಧಿ ಇಲಾಖೆಯ 2018-19ನೇ ಸಾಲಿನ ಚಾಲ್ತಿಯಲ್ಲಿರುವ ರಾಜ್ಯವಲಯ ಯೋಜನೆಗಳಿಗೆ ಲೆಕ್ಕ ಶೀರ್ಷಿಕೆಗಳಡಿ ನಾಲ್ಕನೇ ತ್ರೈಮಾಸಿಕದ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಕೃಇ 70 ಕೃಯೋಕಾ 2018, ಬೆಂಗಳೂರು ದಿನಾಂಕ 10-04-2018 ಮತ್ತು 09-08-2018.
2. ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 04 ಟಿಎಫ್‌ಪಿ 2018, ಬೆಂಗಳೂರು ದಿನಾಂಕ 08-01-2019.
3. ಸರ್ಕಾರದ ಆದೇಶ ಸಂಖ್ಯೆ: ಕೃಇ 76 ಕೃಯೋಕಾ 2018 ದಿ: 20-04-2018.
4. ಸರ್ಕಾರದ ಆದೇಶ ಸಂಖ್ಯೆ: ಕೃಇ 76 ಕೃಯೋಕಾ 2018, ಬೆಂಗಳೂರು ದಿನಾಂಕ 20-08-2018.
5. ಸರ್ಕಾರದ ಆದೇಶ ಸಂಖ್ಯೆ: ಕೃಇ 76 ಕೃಯೋಕಾ 2018, ಬೆಂಗಳೂರು ದಿನಾಂಕ 19-11-2018.
6. ಜಲಾನಯನ ಅಭಿವೃದ್ಧಿ ಇಲಾಖೆ ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಜಅಇ/ಲೆಕ್ಕ-5/ತ್ರೈ.ಮಾ.ಅ.ಬಿ/2018-19, ಬೆಂಗಳೂರು, ದಿನಾಂಕ 05-01-2019.

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿನ ಸರ್ಕಾರದ ಆದೇಶದಲ್ಲಿ, 2017-18ನೇ ಸಾಲಿನಲ್ಲಿ ಜಲಾನಯನ ಅಭಿವೃದ್ಧಿ ಇಲಾಖೆಯ ಚಾಲ್ತಿಯಲ್ಲಿದ್ದ ಯೋಜನೆಗಳನ್ನು 2018-19ನೇ ಸಾಲಿನಲ್ಲಿ ಮುಂದುವರೆಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಮೇಲೆ ಓದಲಾದ (2)ರ ಆದೇಶದನ್ವಯ, ರಾಜ್ಯ ಯೋಜನೆಗಳಿಗೆ ಆಯವ್ಯಯದಲ್ಲಿ ಒದಗಿಸಿರುವ ಅನುದಾನದಲ್ಲಿ ಶೇ.25 ರಂತೆ ನಾಲ್ಕನೇ ತ್ರೈಮಾಸಿಕಕ್ಕೆ ಅನುದಾನ ಬಿಡುಗಡೆ ಮಾಡಲು ಸರ್ಕಾರದ ಕಾರ್ಯದರ್ಶಿಗಳಿಗೆ ಆರ್ಥಿಕ ಅಧಿಕಾರ ಪ್ರತ್ಯಾಯೋಜಿಸಲಾಗಿದೆ.

ಮೇಲೆ ಓದಲಾದ (3)ರ ಆದೇಶದನ್ವಯ, 2018-19ನೇ ಸಾಲಿನಲ್ಲಿ ಜಲಾನಯನ ಅಭಿವೃದ್ಧಿ ಇಲಾಖೆಯಲ್ಲಿ ಮುಂದುವರೆಸಲಾದ 4 ರಾಜ್ಯವಲಯ ಚಾಲ್ತಿ ಯೋಜನೆಗಳಿಗೆ ಮೊದಲನೇ ತ್ರೈಮಾಸಿಕ ಕಂತು ಒಟ್ಟು ರೂ.382.75 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲು ಮಂಜೂರಾತಿಯನ್ನು ನೀಡಲಾಗಿದೆ.

ಮೇಲೆ ಓದಲಾದ (4)ರ ಆದೇಶದನ್ವಯ, 2018-19ನೇ ಸಾಲಿನಲ್ಲಿ ಜಲಾನಯನ ಅಭಿವೃದ್ಧಿ ಇಲಾಖೆಯಲ್ಲಿ ಮುಂದುವರೆಸಲಾದ 4 ರಾಜ್ಯವಲಯ ಚಾಲ್ತಿ ಯೋಜನೆಗಳಿಗೆ ಎರಡನೇ ತ್ರೈಮಾಸಿಕ ಕಂತು ಒಟ್ಟು ರೂ.382.75 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲು ಮಂಜೂರಾತಿಯನ್ನು ನೀಡಲಾಗಿದೆ.

ಮೇಲೆ ಓದಲಾದ (5)ರ ಆದೇಶದನ್ವಯ, 2018-19ನೇ ಸಾಲಿನಲ್ಲಿ ಜಲಾನಯನ ಅಭಿವೃದ್ಧಿ ಇಲಾಖೆಯಲ್ಲಿ ಮುಂದುವರೆಸಲಾದ 4 ರಾಜ್ಯವಲಯ ಚಾಲ್ತಿ ಯೋಜನೆಗಳಿಗೆ ಮೂರನೇ ತ್ರೈಮಾಸಿಕ ಕಂತು ಒಟ್ಟು ರೂ.382.75 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲು ಮಂಜೂರಾತಿಯನ್ನು ನೀಡಲಾಗಿದೆ.

..2)

ಮೇಲೆ ಓದಲಾದ (6)ರ ಪ್ರಸ್ತಾವನೆಯಲ್ಲಿ, ಜಲಾನಯನ ಅಭಿವೃದ್ಧಿ ಇಲಾಖೆಯ ಆಯುಕ್ತರು, 2018-19ನೇ ಸಾಲಿನ ಚಾಲ್ತಿ ಯೋಜನೆಗಳಲ್ಲಿ ಮುಂದುವರೆಸಲಾಗಿರುವ ಒಟ್ಟು 4 ಯೋಜನಾ ಕಾರ್ಯಕ್ರಮಗಳಿಗೆ ನಾಲ್ಕನೇ ತ್ರೈಮಾಸಿಕಕ್ಕೆ ಆಯವ್ಯಯದ ಲೆಕ್ಕ ಶೀರ್ಷಿಕೆಯಡಿಯಲ್ಲಿ ಒದಗಿಸಲಾದ ಅನುದಾನದಲ್ಲಿ ಒಟ್ಟು ರೂ.382.75 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ, ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಜಲಾನಯನ ಅಭಿವೃದ್ಧಿ ಇಲಾಖೆಯ ಆಯುಕ್ತರು ಸಲ್ಲಿಸಿರುವ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 76 ಕೃಯೋಕಾ 2018, ಬೆಂಗಳೂರು, ದಿನಾಂಕ: 01-02-2019.**

**ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, 2018-19ನೇ ಸಾಲಿನಲ್ಲಿ ಜಲಾನಯನ ಅಭಿವೃದ್ಧಿ ಇಲಾಖೆಯಲ್ಲಿ ಮುಂದುವರೆಸಲಾದ ಈ ಕೆಳಕಂಡ 4 ರಾಜ್ಯವಲಯ ಚಾಲ್ತಿ ಯೋಜನೆಗಳಿಗೆ ನಾಲ್ಕನೇ ತ್ರೈಮಾಸಿಕ ಕಂತು ಒಟ್ಟು ರೂ.382.75 ಲಕ್ಷಗಳ (ಮೂರುನೂರ ಎಂಬತ್ತೆರಡು ಲಕ್ಷದ ಎಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ) ಅನುದಾನವನ್ನು ಕೆಳಕಂಡ ಷರತ್ತಿಗೊಳಪಟ್ಟು ಬಿಡುಗಡೆಗೊಳಿಸಿ ಆದೇಶಿಸಲಾಗಿದೆ.**

**2018-19ನೇ ಸಾಲಿನ ನಾಲ್ಕನೇ ತ್ರೈಮಾಸಿಕದಲ್ಲಿ ಮುಂದುವರೆಸಲಾದ ಈ ಕೆಳಕಂಡ ರಾಜ್ಯವಲಯ ಚಾಲ್ತಿ ಯೋಜನೆಗಳಡಿ ಲೆಕ್ಕ ಶೀರ್ಷಿಕೆವಾರು ಬಿಡುಗಡೆ ಮಾಡಿರುವ ಅನುದಾನದ ವಿವರ ಹಾಗೂ ಷರತ್ತುಗಳು ಈ ಕೆಳಕಂಡಂತಿವೆ:**

(ರೂ. ಲಕ್ಷಗಳಲ್ಲಿ)

| ಕ್ರ ಸಂ. | ಯೋಜನೆ | ಲೆಕ್ಕ ಶೀರ್ಷಿಕೆ | ಆಯವ್ಯಯದಲ್ಲಿ ಒದಗಿಸಿರುವ ಒಟ್ಟು ಮೊತ್ತ | ನಾಲ್ಕನೇ ತ್ರೈಮಾಸಿಕಕ್ಕೆ ಬಿಡುಗಡೆ ಮಾಡಲಾದ ಅನುದಾನ |
|---|---|---|---|---|
| 1. | ನಿರ್ದೇಶನಾಲಯ ಮತ್ತು ಇತರೆ ಸಿಬ್ಬಂದಿಗಳು | 2402-00-102-0-01 | 314.00 | 78.50 |
| 2. | ಭೂಸಾರ ಮತ್ತು ಜಲಸಂರಕ್ಷಣೆ ಜಲಾನಯನ ಅಭಿವೃದ್ಧಿ ಇಲಾಖೆ ಜಲಾನಯನ ಅಭಿವೃದ್ಧಿ ನಿರ್ದೇಶನಾಲಯ | 2402-00-102-0-15 | 724.00 | 181.00 |
| 3. | ಜಲಾನಯನ ಅಭಿವೃದ್ಧಿ ಇಲಾಖೆಯಿಂದ ನಿರ್ವಹಿಸಲ್ಪಡುವ ಜಲಾನಯನ ಪ್ರದೇಶದಲ್ಲಿ ಭೂಸಾರ ಸಂರಕ್ಷಣೆ ನದಿ ಕಣಿವೆ ಯೋಜನೆಗಳು | 2402-00-102-0-25 | 384.00 | 96.00 |
| 4. | ಕರ್ನಾಟಕ ಜಲಾನಯನ ತರಬೇತಿ ಕೇಂದ್ರಗಳು | 2402-00-109-0-02 | 109.00 | 27.25 |
| | **ಒಟ್ಟು :** | | **1531.00** | **382.75** |

**ಷರತ್ತುಗಳು:**

1. 2017-18ನೇ ಸಾಲಿನಲ್ಲಿದ್ದ ಕಾರ್ಯಕ್ರಮ / ಘಟಕಗಳನ್ನು ಮಾತ್ರ 2018-19ನೇ ಸಾಲಿನಲ್ಲಿ ಮುಂದುವರೆಸಲಾಗಿದ್ದು, ಸದರಿ ಕಾರ್ಯಕ್ರಮ / ಘಟಕಗಳಿಗೆ ಮಾತ್ರ ಅನುದಾನ ಬಳಸತಕ್ಕದ್ದು. **ಯಾವುದೇ ಹೊಸ ಘಟಕ / ಕಾರ್ಯಕ್ರಮ ಅನುಷ್ಠಾನಗೊಳಿಸಬೇಕಾದ್ದಲ್ಲಿ ಸರ್ಕಾರದ ಆದೇಶ ಸಂಖ್ಯೆ: ಪಿಡಿ 14 ಐಎಂಎಂ 2017 ದಿನಾಂಕ 23-03-2017 ರನ್ವಯ ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸಿ ಅನುಮೋದನೆ ಪಡೆದ ನಂತರವಷ್ಟೇ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸತಕ್ಕದ್ದು.**

..3)

ಈ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ/04/ಟಿಎಫ್‌ಪಿ/2018, ದಿನಾಂಕ: 08-01-2019ರ ಆದೇಶದಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದ ಮೇರೆಗೆ ಹಾಗೂ ಟಿಪ್ಪಣಿ ಸಂಖ್ಯೆ: ಕೃಇ/19/ಆಂಆಸ/2018, ದಿನಾಂಕ: 21.01.2019 ರಲ್ಲಿ ಆಂತರಿಕ ಆರ್ಥಿಕ ಸಲಹೆಗಾರರು ನೀಡಿರುವ ಸಹಮತಿಯೊಂದಿಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

B S Nagarathnam

(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)
01/02/2019

ಪ್ರತಿಯನ್ನು:-

1. ಪ್ರಧಾನ ಮಹಾಲೇಖಪಾಲರು, (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂ: 5398, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು, (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂ: 5398, ಬೆಂಗಳೂರು-01.
3. ಮಹಾಲೇಖಪಾಲರು (ಎ ಮತ್ತು ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂ: 5329, ಬೆಂಗಳೂರು-01.
4. ಆಯುಕ್ತರು / ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
5. ಆಯುಕ್ತರು / ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು
6. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು
7. ನಿರ್ದೇಶಕರು, ಪರಿಯೋಜನಾ ರಚನಾ ವಿಭಾಗ, ಯೋಜನಾ ವಿಭಾಗ, ಬೆಂಗಳೂರು.
8. ಸರ್ಕಾರದ ಉಪ ಕಾರ್ಯದರ್ಶಿ-1, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು
9. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು
10. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ-4), ವಿಧಾನ ಸೌಧ, ಬೆಂಗಳೂರು
11. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಬೆಂಗಳೂರು
12. ಸರ್ಕಾರದ ಜಂಟಿ / ಉಪ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಇವರ ಆಪ್ತ ಶಾಖೆ.
13. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು.
14. ಜಂಟಿ ನಿರ್ದೇಶಕರು, ಹುಜೂರು ಖಜಾನೆ, ಬೆಂಗಳೂರು.
15. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ, ಖನಿಜ ಭವನ, ಬೆಂಗಳೂರು
16. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು ರವರಿಗೆ ಮಾಹಿತಿಗಾಗಿ ನೀಡಲಾಗಿದೆ (ಕೃಷಿ ಆಯುಕ್ತರ ಮುಖಾಂತರ).
17. ತಾಂತ್ರಿಕ ಅಧಿಕಾರಿಗಳು, ಕೃಷಿ ಯೋಜನಾ ಘಟಕ, ಎ ಮತ್ತು ಬಿ, ಕೃಷಿ ಇಲಾಖೆ.
18. ಶಾಖಾ ರಕ್ಷ ಕಡತ / ಹೆಚ್ಚುವರಿ ಪ್ರತಿಗಳು.